# ಭೂ ಸುಧಾರಣೆ ಕಾಯ್ದೆ: ಮತ್ತೆ ಸುಗ್ರೀವಾಜ್ಞೆ

4/11/20

> ■ ಎಸ್‌ಸಿ/ಎಸ್ಟಿ ಸಮುದಾಯದ ಜಮೀನನ್ನು ಯಾವುದೇ ಉದ್ದೇಶಕ್ಕೆ ಖರೀದಿಸಲು ಅವಕಾಶ ಇಲ್ಲದಂತೆ ಹೊಸ ಸುಗ್ರೀವಾಜ್ಞೆ

ಬೆಂಗಳೂರು: ವಿವಾದಾತ್ಮಕ ಭೂಸುಧಾರಣೆ ತಿದ್ದುಪಡಿ ಕಾಯ್ದೆಗೆ ರಾಜ್ಯ ಸರ್ಕಾರ ಮತ್ತೆ ಸುಗ್ರೀವಾಜ್ಞೆ ಹೊರಡಿಸಿದ್ದು, ನೀರಾವರಿ ಜಮೀನನ್ನು ಕೃಷಿಯೇತರ ಚಟುವಟಿಕೆಗಳಿಗೆ ಖರೀದಿಸದಂತೆ ಹಾಗೂ ಎಸ್‌ಸಿ/ಎಸ್ಟಿ ಸಮುದಾಯದ ಜಮೀನನ್ನು ಯಾವುದೇ ಉದ್ದೇಶಕ್ಕೆ ಖರೀದಿಸಲು ಅವಕಾಶ ಇಲ್ಲದಂತೆ ಹೊಸ ಸುಗ್ರೀವಾಜ್ಞೆ ಜಾರಿಗೊಳಿಸಲಾಗಿದೆ.

1974ರ ಮೂಲ ಕಾಯ್ದೆಗೆ ಜುಲೈ ತಿಂಗಳಲ್ಲಿ ತಿದ್ದುಪಡಿ ತಂದು ಸೆಕ್ಷನ್ 79ಎ, 79ಬಿ, 79ಸಿ ಕಲಂಗಳನ್ನು ರದ್ದುಪಡಿಸಿ ಆದೇಶ ಹೊರಡಿಸಿತ್ತು. ಸೆಕ್ಷನ್ 80ರನ್ನು ರದ್ದುಗೊಳಿಸಿ ಸುಗ್ರೀವಾಜ್ಞೆ ಹೊರಡಿಸಿತ್ತು. ನಂತರ ಸೆಪ್ಟೆಂಬರ್‌ನಲ್ಲಿ ನಡೆದ ಅಧಿವೇಶನದಲ್ಲಿ ವಿಧೇಯಕ ಮಂಡಿಸಿತ್ತು. ಆದರೆ, ವಿರೋಧ ಪಕ್ಷಗಳಿಂದ ವಿರೋಧ ವ್ಯಕ್ತವಾದ ಹಿನ್ನೆಲೆಯಲ್ಲಿ ಎಸ್ಸಿ/ಎಸ್ಟಿ ಸಮುದಾಯಕ್ಕೆ ಸೇರಿದವರ ಜಮೀನು ಖರೀದಿ ಮಾಡುವುದಕ್ಕೆ ನಿಷೇಧ, ನೀರಾವರಿ ಭೂಮಿಯನ್ನು ಕೃಷಿಯೇತರ ಚಟುವಟಿಕೆಗಳಿಗೆ ಖರೀದಿಸಲು ನಿರ್ಬಂಧ ಹಾಗೂ ಒಂದು ಕುಟುಂಬದ ಸದಸ್ಯರು ಹೊಂದುವ ಜಮೀನಿನ ಮಿತಿಯನ್ನು 54 ಎಕರೆಗೆ ಮಿತಿಗೊಳಿಸಲು ರಾಜ್ಯ ಸರ್ಕಾರ ಒಪ್ಪಿಕೊಂಡಿತ್ತು.

ಆದರೆ, ವಿಧಾನ ಪರಿಷತ್‌ನಲ್ಲಿ ವಿಧೇಯಕಕ್ಕೆ ಅಂಗೀಕಾರ ದೊರೆಯದೇ ಇದ್ದುದರಿಂದ ರಾಜ್ಯ ಸರ್ಕಾರ ಜುಲೈನಲ್ಲಿ ಹೊರಡಿಸಿದ್ದ ಸುಗ್ರೀವಾಜ್ಞೆ ನವೆಂಬರ್ 3ಕ್ಕೆ ನಿರಶನಗೊಂಡಿದೆ. ಈ ಹಿನ್ನೆಲೆಯಲ್ಲಿ ಜುಲೈ 13 ರಂದು ಹೊರಡಿಸಿರುವ ಸುಗ್ರೀವಾಜ್ಞೆ ಮುಂದಿನ ಆರು ತಿಂಗಳು ಜಾರಿಯಲ್ಲಿರುವಂತೆ ಮತ್ತೆ ಕೆಲವು ತಿದ್ದುಪಡಿಗಳೊಂದಿಗೆ ಸುಗ್ರೀವಾಜ್ಞೆ ಹೊರಡಿಸಿದೆ.

ಆದರೆ ಈ ಸುಗ್ರೀವಾಜ್ಞೆ ಕುರಿತು ಪ್ರತಿಕ್ರಿಯೆ ನೀಡಿರುವ ಈ ವಿಷಯದ ವಿರುದ್ಧ ಕೋರ್ಟ್ ಮೆಟ್ಟಿಲೇರಿರುವ ಸಾಮಾಜಿಕ ಹೋರಾಟಗಾರ ನಾಗರಾಜ್ ಹೊಂಗಲ್, ಈಗ ನಿರಶಿತವಾದ (ಜುಲೈ 13 -2020) ರ ಸುಗ್ರೀವಾಜ್ಞೆಯನ್ನು ಆಧರಿಸಿ ರಾಜ್ಯ ಸರ್ಕಾರ 18-8-2020ರ ರಂದು ಸುತ್ತೋಲೆಯನ್ನು ಹೊರಡಿಸಿ 1973 ರಿಂದ ಪೂರ್ವಾನ್ವಯವಾಗಿ ಬಾಕಿ ಉಲ್ಲಂಘನೆ ಪ್ರಕರಣಗಳನ್ನು ವಿಲೇವಾರಿ ಮಾಡುವಂತೆ ಜಿಲ್ಲಾಧಿಕಾರಿಗಳು ಹಾಗೂ ಉಪ ವಿಭಾಗಾಧಿಕಾರಿಗಳಿಗೆ ತಿಳಿಸಿತ್ತು. ಇದನ್ನು ಆಧರಿಸಿ ಬಹುತೇಕ ಪ್ರಕರಣಗಳು ವಿಲೇವಾರಿಯಾಗಿವೆ. ಆ ವಿಲೇವಾರಿಯಾದ ಪ್ರಕರಣಗಳು ಜುಲೈ13 ಪೂರ್ವ ಸ್ಥಿತಿಗೆ ಬರಬೇಕು(ಮೂಲ ಕಾಯ್ದೆಯಂತೆ) ಈ ಬಗ್ಗೆ ಸುಗ್ರೀವಾಜ್ಞೆಯಲ್ಲಿ ಸ್ಪಷ್ಟತೆಯಿಲ್ಲ. ಇದರಲ್ಲಿನ ಅಂಶಗಳನ್ನು ಕೂಲಂಕುಶವಾಗಿ ಪರಿಶೀಲಿಸಿ ಹೈಕೋರ್ಟ್ ಗಮನಕ್ಕೆ ತರಲಾಗುವುದು ಎಂದು ಹೇಳಿದ್ದಾರೆ.